# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 407 (545) |
| ಮಾನ್ಯ ಸದಸ್ಯರ ಹೆಸರು | ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 30/01/2026 |
| ಉತ್ತರಿಸುವವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಾರ್ಮಿಕ ಕಾರ್ಡ್ ಹೊಂದಿರುವ ಫಲಾನುಭವಿಗಳಿಗೆ ಇಲಾಖೆಯಿಂದ ನೀಡಲಾಗುತ್ತಿರುವ ಸೌಲಭ್ಯಗಳೇನು: | ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಜಾರಿಗೊಳಿಸುತ್ತಿರುವ ವಿವಿದ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೆ ಕಾರ್ಮಿಕ ಕಾರ್ಡ್‌ಗಳನ್ನು ನೀಡಲಾಗುತ್ತಿದ್ದು, ಸದರಿಯವರಿಗೆ ನೀಡಲಾಗುತ್ತಿರುವ ಸೌಲಭ್ಯಗಳ ವಿವರ ಈ ಕೆಳಕಂಡಂತಿದೆ.<br><br>**<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br><br>ಈ ಮಂಡಳಿ ವತಿಯಿಂದ ನೋಂದಾಯಿತ ಫಲಾನುಭವಿಗಳಿಗೆ ರೂಪಿಸಿರುವ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳ ವಿವರಗಳನ್ನು **ಅನುಬಂಧ-01ರಲ್ಲಿ** ಒದಗಿಸಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br><br>1. **<u>ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ :</u>**<br><br>ಈ ಯೋಜನೆಯಡಿ ಅಸಂಘಟಿತ ವೃತ್ತಿಯಲ್ಲಿ ತೊಡಗಿರುವ ಕಾರ್ಮಿಕರು ಹಾಗೂ ಅಲೆಮಾರಿ ಹಾಗೂ ಅರೆ ಅಲೆಮಾರಿ ಪಂಗಡದ ಕುಲಕಸುಬಿನ ವೃತ್ತಿ ಆಧಾರಿತ ಕೆಲಸದಲ್ಲಿ ತೊಡಗಿರುವ ಕಾರ್ಮಿಕರು ಸೇರಿದಂತೆ ಒಟ್ಟಾರೆ **102** ವರ್ಗಗಳ ಕಾರ್ಮಿಕರನ್ನು ಉಚಿತವಾಗಿ ನೋಂದಾಯಿಸಿ, ಈ ಕೆಳಕಂಡ ಸೌಲಭ್ಯಗಳನ್ನೊಳಗೊಂಡಂತೆ ಸ್ಮಾರ್ಟ್ ಕಾರ್ಡ್ ನೀಡಲಾಗುತ್ತಿದೆ. |

| | | |
|---|---|---|
| | | • **ದೊರಕುವ ಸೌಲಭ್ಯಗಳು:**<br><br>**ಅ) ಅಪಘಾತ ಪರಿಹಾರ ಸೌಲಭ್ಯ:**<br>• ಅಪಘಾತದಿಂದ ಮರಣ ಹೊಂದಿದಲ್ಲಿ ಅವರ ನಾಮನಿರ್ದೇಶಿತರಿಗೆ ರೂ.1.00 ಲಕ್ಷದವರೆಗೆ ಪರಿಹಾರ.<br>• ಅಪಘಾತದಿಂದ ಶಾಶ್ವತ/ ಭಾಗಶಃ ದುರ್ಬಲತೆ ಹೊಂದಿದಲ್ಲಿ ರೂ.1.00 ಲಕ್ಷದವರೆಗೆ ಪರಿಹಾರ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).<br>• ಆಸ್ಪತ್ರೆ ವೆಚ್ಚ ಮರುಪಾವತಿ ರೂ.50,000/- ಗಳವರೆಗೆ. (ಅಪಘಾತ ಪ್ರಕರಣಗಳಲ್ಲಿ ಮಾತ್ರ)<br><br>**ಆ) ಸಹಜ ಮರಣ ಪರಿಹಾರ ಮತ್ತು ಅಂತ್ಯಕ್ರಿಯೆ ವೆಚ್ಚ:**<br><br>ಫಲಾನುಭವಿಯ ಕುಟುಂಬದವರಿಗೆ ಅಂತ್ಯಕ್ರಿಯೆ ವೆಚ್ಚಕ್ಕಾಗಿ ರೂ.10,000/-ಗಳ ಧನ ಸಹಾಯ.<br><br>2. **<u>ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ:</u>**<br><br>ಇ-ಕಾಮರ್ಸ್ ವಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಗಿಗ್ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಸದರಿ ಕಾರ್ಮಿಕರನ್ನು ಸೇವಾ ಸಿಂಧು ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ.<br><br>• **ದೊರಕುವ ಸೌಲಭ್ಯಗಳು:**<br><br>• ಅಪಘಾದಿಂದ ಮರಣ ಹೊಂದಿದಲ್ಲಿ ವಿಮಾ ಪರಿಹಾರ ರೂ2.00 ಲಕ್ಷಗಳ ಹಾಗೂ ಜೀವ ವಿಮೆ ರೂ 2.00 ಲಕ್ಷ ಸೇರಿ ಒಟ್ಟು ರೂ.4.00 ಲಕ್ಷಗಳು.<br>• ಅಪಘಾದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ<br>• ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷದವರೆಗೆ (ಅಪಘಾತ ಪ್ರಕರಣಗಳಿಗೆ ಮಾತ್ರ)<br>• ಜೀವ ವಿಮಾ ರೂ.2.00 ಲಕ್ಷಗಳು. |

| | | |
|---|---|---|
| | | 3. **<u>ಕರ್ನಾಟಕ ರಾಜ್ಯ ದಿನಪತ್ರಿಕೆ ಹಾಗೂ ಹಾಲು ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಮತ್ತು ವೈದ್ಯಕೀಯ ಸೌಲಭ್ಯ ಯೋಜನೆ:</u>**<br><br>ದಿನಪತ್ರಿಕೆ ಹಾಗೂ ಹಾಲು ವಿತರಿಸುವ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಒದಗಿಸುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಸದರಿ ಕಾರ್ಮಿಕರನ್ನು ಮಂಡಳಿಯ ಪೋರ್ಟಲ್ ಮೂಲಕ ನೋಂದಾಯಿಸಲಾಗುತ್ತಿದೆ.<br><br>• **ದೊರಕುವ ಸೌಲಭ್ಯಗಳು:**<br><br>• ಅಪಘಾತದಿಂದ ಮರಣ ಹೊಂದಿದಲ್ಲಿ ರೂ2.00 ಲಕ್ಷ.<br>• ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಲ್ಲಿ ರೂ.2.00 ಲಕ್ಷಗಳವರೆಗೆ (ಶೇಕಡವಾರು ದುರ್ಬಲತೆ ಆಧಾರದ ಮೇಲೆ).<br>• ಅಪಘಾತ ಅಥವಾ ಮಾರಣಾಂತಿಕ ಕಾಯಿಲೆ ಅಥವಾ ಗಂಭೀರ ಅನಾರೋಗ್ಯಕ್ಕೆ ತುತ್ತಾದಲ್ಲಿ ಆಸ್ಪತ್ರೆ ವೆಚ್ಚ ಮರುಪಾವತಿ ರೂ.1.00 ಲಕ್ಷದವರೆಗೆ.<br><br>4. **<u>ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ :</u>**<br><br>ಈ ಯೋಜನೆಯಡಿ ಖಾಸಗಿ ವಾಣಿಜ್ಯ ಸಾರಿಗೆ ವಾಹನಗಳ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ನಿರಂತರವಾಗಿ ಅಪಘಾತಗಳಿಗೆ ತುತ್ತಾಗಿ ಸಂಕಷ್ಟಕ್ಕೆ ಸಿಲುಕುವ ಸಾಧ್ಯತೆಗಳು ಹೆಚ್ಚಾಗಿರುತ್ತದೆ. ಆದ್ದರಿಂದ, ಸದರಿ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಿದ್ದು, ಯೋಜನೆಯ ಸೌಲಭ್ಯಗಳು ಈ ಕೆಳಕಂಡಂತಿದೆ.<br><br>• **ದೊರಕುವ ಸೌಲಭ್ಯಗಳು(ಅಪಘಾತ ಪರಿಹಾರ):**<br><br>• ಮರಣ- ರೂ. 5.00 ಲಕ್ಷ,<br>• ಶಾಶ್ವತ ದುರ್ಬಲತೆ-ರೂ. 2.00 ಲಕ್ಷದವರೆಗೆ,<br>• ಆಸ್ಪತ್ರೆ ವೆಚ್ಚ ಮರುಪಾವತಿ- ರೂ.1.00 ಲಕ್ಷದವರೆಗೆ<br>• ಶೈಕ್ಷಣಿಕ ಧನಸಹಾಯ ವಾರ್ಷಿಕ ರೂ.10,000/- (1ನೇ ತರಗತಿಯಿಂದ 12ನೇ ತರಗತಿ). |

| | | |
|---|---|---|
| | | **5. ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ:-**<br><br>ಅಸಂಘಟಿತ ವರ್ಗದ ಕಾರ್ಮಿಕರಲ್ಲಿ ಖಾಸಗಿ ವಾಣಿಜ್ಯ ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರಿಗೆ ಸಾಮಾಜಿಕ ಭದ್ರತೆ ಹಾಗೂ ಕಲ್ಯಾಣ ಸೌಲಭ್ಯಗಳನ್ನು ಒದಗಿಸಲು ಅಗತ್ಯವಿರುವ ಸಂಪನ್ಮೂಲ ಕ್ರೋಢೀಕರಣದ ಉದ್ದೇಶದಿಂದ, ಕರ್ನಾಟಕ ಮೋಟಾರು ಸಾರಿಗೆ ಮತ್ತು ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ವಿಧೇಯಕ, 2024ನ್ನು ಅಧಿಸೂಚಿಸಲಾಗಿದ್ದು, ಫಲಾನುಭವಿಗಳಿಗೆ ಸೌಲಭ್ಯಗಳನ್ನು ವಿತರಿಸಲು ಪ್ರತ್ಯೇಕವಾಗಿ, "ಕರ್ನಾಟಕ ರಾಜ್ಯ ಮೋಟಾರು ಸಾರಿಗೆ ಹಾಗೂ ಇತರೆ ಸಂಬಂಧಿತ ಕಾರ್ಮಿಕರ ಸಾಮಾಜಿಕ ಭದ್ರತೆ ಮತ್ತು ಕ್ಷೇಮಾಭಿವೃದ್ಧಿ ಮಂಡಳಿ"ಯನ್ನು ರಚಿಸಲಾಗಿರುತ್ತದೆ. ಈ ಯೋಜನೆಯಡಿ ಫಲಾನುಭವಿಗಳಿಗೆ ಕೆಳಕಂಡ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br><br>**(ಅ) ಅಪಘಾತ ಪರಿಹಾರ ಸೌಲಭ್ಯ:**<br><br>• ಅಪಘಾತದಿಂದ ಫಲಾನುಭವಿಗಳು ನಿಧನರಾದಲ್ಲಿ, ನಾಮನಿರ್ದೇಶಿತರಿಗೆ ರೂ.5 ಲಕ್ಷಗಳ ಪರಿಹಾರ.<br>• ಅಪಘಾತದಿಂದ ಶಾಶ್ವತ ದುರ್ಬಲತೆ ಹೊಂದಿದಾಗ, ಫಲಾನುಭವಿಗೆ ದುರ್ಬಲತೆಯ ಪ್ರಮಾಣಕ್ಕನುಗುಣವಾಗಿ ರೂ.2 ಲಕ್ಷಗಳ ವರೆಗೆ ಪರಿಹಾರ.<br>• ಅಪಘಾತದಿಂದ ತಾತ್ಕಾಲಿಕ ದುರ್ಬಲತೆ ಹೊಂದಿದಾಗ- ಆಸ್ಪತ್ರೆ ವೆಚ್ಚ ಮರುಪಾವತಿ ರೂ. 1.00 ಲಕ್ಷದವರೆಗೆ.<br><br>**(ಆ)ನೈಸರ್ಗಿಕ ಮರಣ ಪರಿಹಾರ ಹಾಗೂ ಅಂತ್ಯಸಂಸ್ಕಾರ ವೆಚ್ಚ:**<br><br>ಸಹಜ ಮರಣ ಹೊಂದಿದ ಫಲಾನುಭವಿಗಳ ಅವಲಂಬಿತರಿಗೆ ಅಂತ್ಯ ಸಂಸ್ಕಾರದ ವೆಚ್ಚವೂ ಸೇರಿದಂತೆ ರೂ.25,000/-ಗಳ ಪರಿಹಾರ. |

| | | |
|---|---|---|
| | | **(ಇ) ಶೈಕ್ಷಣಿಕ ಧನಸಹಾಯ :**<br><br>i. **ನೋಂದಾಯಿತ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**<br><br>• 12ನೇ ತರಗತಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.3,000/-<br>• ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.5,500/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.8,000/-<br>• ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.11,000/-<br><br>**(ii) ಅಪಘಾತದಿಂದ ನಿಧನರಾದ / ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಫಲಾನುಭವಿಯ ಗರಿಷ್ಠ ಇಬ್ಬರು ಮಕ್ಕಳಿಗೆ:-**<br><br>• 1ನೇ ತರಗತಿಯಿಂದ ಪದವಿ ಅಥವಾ ತತ್ಸಮಾನ - ವಾರ್ಷಿಕ ತಲಾ ರೂ.10,000/-<br>• ಇಂಜಿನಿಯರಿಂಗ್ ಹಾಗೂ ವೈದ್ಯಕೀಯ ಶಿಕ್ಷಣ - ವಾರ್ಷಿಕ ತಲಾ ರೂ.20,000/-<br>• ಸ್ನಾತಕೋತ್ತರ ಪದವಿ - ವಾರ್ಷಿಕ ತಲಾ ರೂ.25,000/-<br><br>**(ಈ) ಹೆರಿಗೆ ಸಹಾಯ ಧನ:**<br><br>ಫಲಾನುಭವಿಯ ಮೊದಲ ಎರಡು ಹೆರಿಗೆಗಳಿಗೆ ಮಾತ್ರ ಸೀಮಿತಗೊಂಡಂತೆ ತಲಾ ರೂ.10,000/-ಗಳು. |
| ಆ) | ಕಳೆದ ಮೂರು ವರ್ಷಗಳಿಂದ ಧಾರವಾಡ ನಗರ ಪ್ರದೇಶ ಹಾಗೂ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರಕ್ಕೆ ಇಲಾಖೆ ಯಿಂದ ಬಿಡುಗಡೆ ಮಾಡ ಲಾಗಿರುವ ಅನುದಾನ ಎಷ್ಟು; | ಹುಬ್ಬಳ್ಳಿ ಧಾರವಾಡ ಸೆಂಟ್ರಲ್ ವಿದಾನಸಭಾ ಕ್ಷೇತ್ರ ವ್ಯಾಪ್ತಿಗೆ ಸಂಬಂಧಿಸಿದಂತೆ, ಕಾರ್ಮಿಕ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ವಿವಿಧ ಮಂಡಳಿಗಳ ಮೂಲಕ ಬಿಡುಗಡೆಯಾದ ಅನುದಾನದ ವಿವರ ಈ ಕೆಳಕಂಡಂತಿದೆ. |
| ಇ) | ಸದರಿ ಅನುದಾನವನ್ನು ಯಾವ ಕಾರಣಕ್ಕಾಗಿ ವಿನಿಯೋಗಿಸಲಾ ಗುತ್ತಿದೆ? | **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br><br>ಈ ಮಂಡಳಿ ವತಿಯಿಂದ ಯಾವುದೇ ಜಿಲ್ಲೆ/ವಿಧಾನಸಭಾ ಕ್ಷೇತ್ರಕ್ಕೆ ಅನುದಾನ ಬಿಡುಗಡೆ ಮಾಡುವುದಿಲ್ಲ.<br><br>ಆದರೆ, ಮಂಡಳಿಯಲ್ಲಿ ನೋಂದಣಿಯಾಗಿರುವ ಎಲ್ಲಾ ಫಲಾನುಭವಿಗಳು ಸಲ್ಲಿಸುವ ಕ್ಲೇಮ್ |

| | | |
|---|---|---|
| | | ಅರ್ಜಿಗಳನ್ನು ನಿಯಮಾನುಸಾರ ಪರಿಶೀಲಿಸಿ ಮಂಜೂರಾದ ಅರ್ಜಿಗಳಿಗೆ ಸಹಾಯಧನವನ್ನು ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ ಡಿಬಿಟಿ ಮೂಲಕ ಜಮೆ ಮಾಡಲಾಗುತ್ತದೆ. ಅದರಂತೆ, ಕಳೆದ ಮೂರು ವರ್ಷಗಳಿಂದ ಧಾರವಾಡ ನಗರ ಪ್ರದೇಶ ಹಾಗೂ ಹುಬ್ಬಳ್ಳಿ ಸೆಂಟ್ರಲ್ ವಿಧಾನಸಭಾ ಕ್ಷೇತ್ರ ಸೇರಿದಂತೆ ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿನ ನೋಂದಾಯಿತ ಫಲಾನುಭವಿಗಳು ಪಡೆದುಕೊಂಡಿರುವ ಸೌಲಭ್ಯದ ವಿವರವನ್ನು **ಅನುಬಂಧ-02 ರಲ್ಲಿ** ಒದಗಿಸಿದೆ.<br><br>**<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ:</u>**<br>ಈ ಮಂಡಳಿಯು ಜಾರಿಗೊಳಿಸುತ್ತಿರುವ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಸೌಲಭ್ಯಗಳನ್ನು ಒದಗಿಸಲು ರಾಜ್ಯಾವಾರು ಅನುದಾನವನ್ನು ಬಿಡುಗಡೆಗೊಳಿಸಲಾಗುತ್ತಿದ್ದು, ವಿಧಾನ ಸಭಾ ಕ್ಷೇತ್ರವಾರು/ಜಿಲ್ಲಾವಾರು ಯಾವುದೇ ಅನುದಾನ ಬಿಡುಗಡೆಗೊಳಿಸಿರುವುದಿಲ್ಲ. ಕಳೆದ ಮೂರು ವರ್ಷಗಳಲ್ಲಿ ವಿವಿಧ ಯೋಜನೆಗಳಡಿ ಬಿಡುಗಡೆಯಾದ ರಾಜ್ಯಾವಾರು ಅನುದಾನದ ವಿವರ ಈ ಕೆಳಗಿನಂತಿದೆ. |

| **ಯೋಜನೆ ಮತ್ತು ಲೆಕ್ಕ ಶೀರ್ಷಿಕೆ** | **2022-23** | **2023-24** | **2024-25** |
|---|---|---|---|
| | **ಬಿಡುಗಡೆ ಯಾದ ಅನುದಾನ** | **ಬಿಡುಗಡೆ ಯಾದ ಅನುದಾನ** | **ಬಿಡುಗಡೆ ಯಾದ ಅನುದಾನ** |
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ (ಅಪಘಾತ ಪರಿಹಾರ ಹಾಗೂ ಶೈಕ್ಷಣಿಕ ಧನಸಹಾಯ) 2230-01-103-7-03(059) | **476.35** | **1000.00** | **1000.00** |
| ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ ಹಾಗೂ ಅಂಬೇಡ್ಕರ್ ಕಾರ್ಮಿಕ ಸಹಾಯ ಹಸ್ತ ಯೋಜನೆ (ಅಸಂಘಟಿತ ಕಾರ್ಮಿಕರ ನೋಂದಣಿ) 2230-01-111-0-05(059) | **1.00** | **500.00** | **500.00** |

| | | | | | |
|---|---|---|---|---|---|
| | | ಕರ್ನಾಟಕ ರಾಜ್ಯ ದಿನಪತ್ರಿಕೆ ವಿತರಣಾ ಕಾರ್ಮಿಕರ ಅಪಘಾತ ಪರಿಹಾರ ಹಾಗೂ ವೈದ್ಯಕೀಯ ಸೌಲಭ್ಯ ಯೋಜನೆ 2230-01-111-0-05(059) | - | **130.00** | **100.00** |
| | | ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆ 2230-01-111-0-05(100) | - | **100.00** | **100.00** |

**ಕಾಇ 48 ಎಲ್ಇಟಿ 2026**

**(ಸಂತೋಷ್ ಎಸ್ ಲಾಡ್)**
**ಕಾರ್ಮಿಕ ಸಚಿವರು**

## ಅನುಬಂಧ -1

### ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 545 (407)

### ಮಂಡಳಿಯ ವತಿಯಿಂದ ಫಲಾನುಭವಿಗಳು ಮತ್ತು ಅವಲಂಭಿತರಿಗೆ ನೀಡುತ್ತಿರುವ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳ ವಿವರ

1. **ಪಿಂಚಣಿ ಸೌಲಭ್ಯ:** ಮೂರು ವರ್ಷ ಸದಸ್ಯತ್ವದೊಂದಿಗೆ 60 ವರ್ಷ ಪೂರ್ಯೆಸಿದ ಫಲಾನುಭವಿಗೆ ಮಾಸಿಕ ರೂ.3,000/-
2. **ಕುಟುಂಬ ಪಿಂಚಣಿ ಸೌಲಭ್ಯ:** ಮೃತ ಪಿಂಚಣಿದಾರರ ಪತಿ/ಪತ್ನಿಗೆ ಮಾಸಿಕ **ರೂ.1500/-**
3. **ದುರ್ಬಲತೆ ಪಿಂಚಣಿ:** ನೋಂದಾಯಿತ ಫಲಾನುಭವಿಯು ಖಾಯಿಲೆಗಳಿಂದ ಅಥವಾ ಕಟ್ಟಡ ಕಾಮಗಾರಿಗಳ ಅಪಘಾತದಿಂದ ಶಾಶ್ವತ /ಭಾಗಶಃ ಅಂಗ ವಿಕಲತೆ ಹೊಂದಿದ್ದರೆ ಮಾಸಿಕ **ರೂ.2,000/-** ಪಿಂಚಣಿ ಹಾಗೂ ಶೇಕಡವಾರು ದುರ್ಬಲತೆಯನ್ನಾಧರಿಸಿ **ರೂ. 2,00,000/-** ದವರೆಗೆ ಅನುಗ್ರಹರಾಶಿ ಸಹಾಯಧನ.
4. **ಕನ್ನಡಕ, ಶ್ರವಣಯಂತ್ರ, ಕೃತಕ ಕೈಕಾಲು ಮತ್ತು ಗಾಲಿ ಕುರ್ಚಿ** ಮರುಪಾವತಿ ಸೌಲಭ್ಯ (ಈ ಯೋಜನೆಯನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳಲಾಗುತ್ತಿದೆ).
5. **ಟ್ರೇನಿಂಗ್-ಕಮ್-ಟೂಲ್‌ಕಿಟ್ಸ್ ಸೌಲಭ್ಯ (ಶ್ರಮ ಸಾಮರ್ಥ್ಯ): ರೂ. 20,000/- ವರೆಗೆ.**
6. **ವಸತಿ ಸೌಲಭ್ಯ (ಕಾರ್ಮಿಕ ಗೃಹಭಾಗ್ಯ): ರೂ.2,00,000/-** ದವರೆಗೆ ಮುಂಗಡ ಸೌಲಭ್ಯ.
7. **ಹೆರಿಗೆ ಸೌಲಭ್ಯ (ತಾಯಿ ಲಕ್ಷ್ಮೀಬಾಂಡ್):** ಮಹಿಳಾ ಫಲಾನುಭವಿಯ ಮೊದಲ ಎರಡು ಮಗುವಿನ ಜನನಕ್ಕೆ ರೂ.50,000/-.
8. **ಅಂತ್ಯಕ್ರಿಯೆ ವೆಚ್ಚ: ರೂ. 4,000/-** ಹಾಗೂ ಅನುಗ್ರಹ ರಾಶಿ **ರೂ.1,46,000/-** ಸಹಾಯಧನ.

| ಕ್ರ. ಸಂ | ಕೋರ್ಸ್/ತರಗತಿ | ತರಗತಿ/ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) | ಸ್ನಾತ್ತಕೋತ್ತರ ಪದವಿ (ಪ್ರತಿ ವರ್ಷಕ್ಕೆ) (ರೂ.ಗಳಲ್ಲಿ) |
|---|---|---|---|
| 1 | 1ನೇ ತರಗತಿಯಿಂದ 5ನೇ ತರಗತಿ | 1,800/- | - |
| 2 | 6ನೇ ತರಗತಿಯಿಂದ 8ನೇ ತರಗತಿ | 2,400/- | - |
| 3 | 9 ಮತ್ತು 10ನೇ ತರಗತಿ | 3,000/- | - |
| 4 | ಪಿಯುಸಿ, 11 ಹಾಗೂ 12ನೇ ತರಗತಿ ಅಥವಾ ತತ್ಸಮಾನ ಕೋರ್ಸ್. | 6,000/- | - |
| 5 | 10ನೇ ತರಗತಿ ನಂತರದ ಐಟಿಐ/ ತತ್ಸಮಾನ ತಾಂತ್ರಿಕ ಕೋರ್ಸ್ □ಗಳು | 10,000/- | - |
| 6 | ಪಿಯುಸಿ ನಂತರದ ಯಾವುದೇ ಡಿಪ್ಲೋಮ ತರಗತಿ. | 12,000/- | - |
| 7 | ಸಾಮಾನ್ಯ ಪದವಿ (ಜನರಲ್ ಡಿಗ್ರಿ) - ಬಿಎ, ಬಿಕಾಂ, ಬಿಎಸ್ಸಿ ಮುಂತಾದವಗಳು | 15,000/- | 20,000/- |
| 8 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ Vocational ವೃತ್ತಿಪರ ಕೋರ್ಸ್‌ಗಳು ಕಾನೂನು ಪದವಿ ಸಹಿತ (Professional Courses) | 20,000/- | 25,000/- |
| 9 | ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ತಾಂತ್ರಿಕ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 10 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ಅರೆ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Para Medical Courses) | 20,000/- | 25,000/- |
| 11 | 03 ಅಥವಾ ಅದಕ್ಕಿಂತ ಹೆಚ್ಚಿನ ಅವಧಿಯ ವೈದ್ಯಕೀಯ ವೃತ್ತಿಪರ ಕೋರ್ಸ್‌ಗಳು (Professional Courses) | 25,000/- | 35,000/- |
| 12 | ರಾಷ್ಟ್ರೀಯ ಕಾನೂನು ಶಾಲೆಗಳಿಗೆ ಸಮನಾದ ಕಾನೂನು ವಿದ್ಯಾ ಸಂಸ್ಥೆಗಳು | 40,000/- | 50,000/- |
| 13 | ಪಿಹೆಚ್‌ಡಿ/ಎಮ್‌ಫಿಲ್ (03 ವರ್ಷ ಅವಧಿಯವರೆಗೆ) | 40,000/- | - |
| 14 | IIT, IIIT, AIMS, IISc, IISERC ನಂತಹ ಪ್ರತಿಷ್ಠಿತ ರಾಷ್ಟ್ರೀಯ ವಿದ್ಯಾಸಂಸ್ಥೆಗಳು. | 50,000/- | 60,000/- |

9. **ವೈದ್ಯಕೀಯ ಸಹಾಯ ಧನ (ಕಾರ್ಮಿಕ ಆರೋಗ್ಯ ಭಾಗ್ಯ):** ನೋಂದಾಯಿತ ಫಲಾನುಭವಿ ಹಾಗೂ ಅವರ ಅವಲಂಭಿತರಿಗೆ **ರೂ. 300/- ರಿಂದ ರೂ. 20,000/- ವರೆಗೆ.**
10. **ಅಪಘಾತ ಪರಿಹಾರ:** ನೊಂದಾಯಿತ ಕಟ್ಟಡ ಕಾರ್ಮಿಕರು ಕೆಲಸದ ಸ್ಥಳದಲ್ಲಿ **ಮರಣ** ಹೊಂದಿದ್ದಲ್ಲಿ **ರೂ.8,00,000/- ಹಾಗೂ** ಸಂಪೂರ್ಣ ಶಾಶ್ವತ ದುರ್ಬಲತೆಯಾದಲ್ಲಿ **ರೂ. 2,00,000/-.**
11. **ಪ್ರಮುಖ ವೈದ್ಯಕೀಯ ವೆಚ್ಚ ಸಹಾಯಧನ (ಕಾರ್ಮಿಕ ಚಿಕಿತ್ಸಾ ಭಾಗ್ಯ)**: ಹೃದ್ರೋಗ, ಕಿಡ್ನಿ ಜೋಡಣೆ, ಕ್ಯಾನ್ಸರ್ ಚಿಕಿತ್ಸೆ, ಕಣ್ಣಿನ ಶಸ್ತ್ರಚಿಕಿತ್ಸೆ, ಪಾರ್ಶ್ವವಾಯು, ಮೂಳೆ ಶಸ್ತ್ರಚಿಕಿತ್ಸೆ, ಗರ್ಭಕೋಶ ಶಸ್ತ್ರಚಿಕಿತ್ಸೆ, ಅಸ್ತಮಚಿಕಿತ್ಸೆ, ಗರ್ಭಪಾತ ಪ್ರಕರಣಗಳು, ಪಿತ್ತಕೋಶದ ತೊಂದರೆಗೆ ಸಂಬಂಧಿತ ಚಿಕಿತ್ಸೆ, ಮೂತ್ರಪಿಂಡದಲ್ಲಿನ ಕಲ್ಲುತೆಗೆಯುವ ಚಿಕಿತ್ಸೆ, ಮೆದುಳಿನ ರಕ್ತಸ್ರಾವದ ಚಿಕಿತ್ಸೆ, ಅಲ್ಸರ್ ಚಿಕಿತ್ಸೆ, ಡಯಾಲಿಸಿಸ್ ಚಿಕಿತ್ಸೆ , ಕಿಡ್ನಿಶಸ್ತ್ರ ಚಿಕಿತ್ಸೆ, ಇ.ಎನ್.ಟಿ ಚಿಕಿತ್ಸೆ, ಶಸ್ತ್ರ ಚಿಕಿತ್ಸೆ, ನರರೋಗ ಶಸ್ತ್ರಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ವ್ಯಾಸ್ಕುಲರ್ ಶಸ್ತ್ರಚಿಕಿತ್ಸೆ, ಅನ್ನನಾಳದ ಚಿಕಿತ್ಸೆ ಮತ್ತು ಶಸ್ತ್ರ ಚಿಕಿತ್ಸೆ, ಕರುಳಿನ ಶಸ್ತ್ರಚಿಕಿತ್ಸೆ, ಸ್ತನ ಸಂಬಂಧಿತ ಚಿಕಿತ್ಸೆ ಮತ್ತು ಶಸ್ತ್ರಚಿಕಿತ್ಸೆ, ಹರ್ನಿಯ ಶಸ್ತ್ರಚಿಕಿತ್ಸೆ, ಅಪೆಂಡಿಕ್ಸ್ ಶಸ್ತ್ರಚಿಕಿತ್ಸೆ, ಮೂಳೆಮುರಿತ/ ಡಿಸ್‌ಲೊಕೇಶನ್ ಚಿಕಿತ್ಸೆ, ಇತರೆ ಔದ್ಯೋಗಿಕ ಖಾಯಿಲೆಗಳ ಚಿಕಿತ್ಸೆಗಳಿಗೆ **ರೂ.2,00,000/-ವರೆಗೆ.**
12. **ಮದುವೆ ಸಹಾಯ ಧನ (ಗೃಹ ಲಕ್ಷ್ಮೀ ಬಾಂಡ್):** ಫಲಾನುಭವಿ ಅಥವಾ ಅವರ ಇಬ್ಬರು ಮಕ್ಕಳ ಮದುವೆಗೆ **ತಲಾ ರೂ. 60,000/-.**
13. **ತಾಯಿ ಮಗು ಸಹಾಯ ಹಸ್ತ:** ಮಹಿಳಾ ಫಲಾನುಭವಿಯು ಮಗುವಿಗೆ ಜನ್ಮ ನೀಡಿದ ಸಂದರ್ಭದಲ್ಲಿ ಆಕೆಯ ಮಗುವಿನ ಶಾಲಾ ಪೂರ್ವಶಿಕ್ಷಣ ಮತ್ತು ಪೌಷ್ಠಿಕತೆಗಾಗಿ ಮಗುವಿಗೆ ಮೂರು ವರ್ಷಗಳು ತುಂಬುವವರೆಗೆ ವಾರ್ಷಿಕ **ರೂ. 6,000/- ಗಳ** ಸಹಾಯಧನ.
14. **ಸುರಕ್ಷತಾ ಕಿಟ್:** ನೋಂದಾಯಿತ ಕಾರ್ಮಿಕರ ವೃತ್ತಿಗನುಗುಣವಾಗಿ ಸುರಕ್ಷತಾ ಕಿಟ್‌ಗಳ ವಿತರಣೆ
15. **ಸಂಚಾರಿ ಆರೋಗ್ಯ ಕ್ಲಿನಿಕ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯ ತಪಾಸಣೆ ಮಾಡುವ ಮೂಲಕ ಅವಶ್ಯಕ ಔಷಧೋಪಚಾರಗಳ ವಿತರಣೆ
16. **ಪ್ರೀವೆಂಟಿವ್ ಹೆಲ್ತ್ ಕೇರ್ ಯೋಜನೆ:** ನೋಂದಾಯಿತ ಕಾರ್ಮಿಕರು ಹಾಗೂ ಅವರ ಅವಲಂಬಿತರಿಗೆ ಆರೋಗ್ಯದ ಮುನ್ನೆಚ್ಚರಿಗಾಗಿ ನಿಗಧಿತ 23 ರೀತಿಯ ವೈದ್ಯಕೀಯ ಪರೀಕ್ಷೆಗಳನ್ನು ನಡೆಸಿ ವೈದ್ಯಕೀಯ ವರದಿಗಳ ವಿತರಣೆ

## ಅನುಬಂಧ -02

**ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ರವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 545 (407)**

**ಕಳೆದ ಮೂರು ವರ್ಷಗಳಲ್ಲಿ ಧಾರವಾಡ ಜಿಲ್ಲಾ ವ್ಯಾಪ್ತಿಯಲ್ಲಿ ಮಂಡಳಿಯ ವಿವಿಧ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ಪಡೆದ ವಿವರ**

| ಕ್ರಮ ಸಂಖ್ಯೆ | ಸೌಲಭ್ಯ | ಸಹಾಯಧನ ಪಡೆದ ಫಲಾನುಭವಿಗಳ ಸಂಖ್ಯೆ | ಮೊತ್ತ (ರೂ.ಗಳಲ್ಲಿ) |
|---|---|---|---|
| 01 | ಶೈಕ್ಷಣಿಕ ಸಹಾಯಧನ | 68286 | 168290850 |
| 02 | ಮದುವೆ ಸಹಾಯಧನ | 3268 | 196080000 |
| 03 | ಪ್ರಮುಖ ವೈದ್ಯಕೀಯ ವೆಚ್ಚ ಮರುಪಾವತಿ | 117 | 4721752 |
| 04 | ವೈದ್ಯಕೀಯ ಸಹಾಯಧನ | 61 | 1035700 |
| 04 | ಪಿಂಚಣಿ ಸೌಲಭ್ಯ | 325 | 4365000 |
| 05 | ದುರ್ಬಲತೆ ಪಿಂಚಣಿ ಸೌಲಭ್ಯ | 05 | 794000 |
| 06 | ಅಂತ್ಯಸಂಸ್ಕಾರ ವೆಚ್ಚ ಪರಿಹಾರ | 597 | 44775000 |
| 07 | ಅಪಘಾತ ಪರಿಹಾರ | 16 | 7660000 |
| 08 | ಹೆರಿಗೆ ಸಹಾಯಧನ | 610 | 28750000 |
| | ತಾಯಿ ಮಗು ಸಹಾಯ ಹಸ್ತ | 90 | 540000 |
| | **ಒಟ್ಟು** | **73375** | **457012302** |